**All India Radio: Bangalore**
**National Bulletin In Kannada**
**07.02.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.02.2026  1.10 p.m.**

**<><><><>**

ಮುಖ್ಯಾಂಶಗಳು

1. ಭಾರತ - ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದ ಘೋಷಣೆ
2. ಎರಡು ದಿನಗಳ ಮಲೇಷ್ಯಾ ಭೇಟಿಗಾಗಿ ಕೌಲಾಲಂಪುರಕ್ಕೆ ತೆರಳಿದ ಪ್ರಧಾನಿ ನರೇಂದ್ರ ಮೋದಿ
3. ಛತ್ತೀಸ್‌ಗಢಕ್ಕೆ ಇಂದಿನಿಂದ ಮೂರು ದಿನಗಳ ಕಾಲ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ; ಆಂತರಿಕ ಭದ್ರತಾ ಪರಿಸ್ಥಿತಿ ಪರಿಶೀಲನೆ
4. ವಿಶ್ವಕಪ್ ವಿಜೇತ ಹತ್ತೊಂಬತ್ತು ವರ್ಷದೊಳಗಿನ ಭಾರತ ತಂಡಕ್ಕೆ ಗಣ್ಯರ ಅಭಿನಂದನೆ; ಬಿಸಿಸಿಐನಿಂದ ಬಹುಮಾನ ಘೋಷಣೆ

<><><><>

ಪರಸ್ಪರ ಲಾಭದಾಯಕ ವ್ಯಾಪಾರಕ್ಕೆ ಸಂಬಂಧಿಸಿದಂತೆ ಮಧ್ಯಂತರ ಒಪ್ಪಂದದ ಹಂತ ತಲುಪಿರುವುದಾಗಿ ಭಾರತ ಮತ್ತು ಅಮೆರಿಕ ಇಂದು ಘೋಷಿಸಿವೆ. ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯವು ಭಾರತ-ಅಮೆರಿಕ ಜಂಟಿ ಹೇಳಿಕೆಯನ್ನು ಹಂಚಿಕೊಂಡಿದೆ. ಕಳೆದ ವರ್ಷ ಫೆಬ್ರವರಿ ೧೩ರಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಾರಂಭಿಸಿದ ಭಾರತ - ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಮಾತುಕತೆಗಳಿಗೆ ಉಭಯ ದೇಶಗಳ ಬದ್ಧತೆಯನ್ನು ಇದು ತೋರುತ್ತದೆ. ಜಂಟಿ ಹೇಳಿಕೆಯ ಪ್ರಕಾರ ಭಾರತದ ಸರಕುಗಳ ಮೇಲೆ ಅಮೆರಿಕ ಶೇಕಡ ೧೮ರಷ್ಟು ಸುಂಕ ವಿಧಿಸುತ್ತದೆ. ಅಮೆರಿಕದ ಎಲ್ಲಾ ಕೈಗಾರಿಕಾ ಸರಕುಗಳು ಹಾಗೂ ಆಹಾರ ಮತ್ತು ಕೃಷಿ ಉತ್ಪನ್ನಗಳ ಮೇಲಿನ ಸುಂಕವನ್ನು ಭಾರತ ತೆಗೆದುಹಾಲಿದೆ. ಅಥವಾ ಕಡಿಮೆ ಮಾಡಲಿದೆ. ಈ ಕುರಿತು ಹರ್ಷ ವ್ಯಕ್ತಪಡಿಸಿರುವ ಪ್ರಧಾನಿ ನರೇಂದ್ರ ಮೋದಿ, ಉಭಯ ದೇಶಗಳ ನಡುವಿನ ಪ್ರಬಲ ಸಂಬಂಧ ಕುರಿತಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವೈಯಕ್ತಿಕ ಬದ್ಧತೆಗಾಗಿ ಧನ್ಯವಾದ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಬೆಳವಣಿಗೆಯು ಭಾರತ - ಅಮೆರಿಕ ಪಾಲುದಾರಿಕೆಯಲ್ಲಿ ಬೆಳೆಯುತ್ತಿರುವ ನಂಬಿಕೆ ಮತ್ತು ಉತ್ಸಾಹವನ್ನು ಪ್ರತಿಬಿಂಬಿಸುತ್ತದೆ. ಇದು ಮೇಕ್ ಇನ್ ಇಂಡಿಯಾವನ್ನು ಬಲಪಡಿಸುವುದಲ್ಲದೇ ಮಹಿಳೆಯರು ಮತ್ತು ಯುವಕರಿಗೆ ದೊಡ್ಡ ಪ್ರಮಾಣದ ಉದ್ಯೋಗಾವಕಾಶ ಸೃಷ್ಟಿಸುತ್ತದೆ ಎಂದು ತಿಳಿಸಿದ್ದಾರೆ.

<><><><>

ಭಾರತ - ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದವನ್ನು ಭಾರತದ ಆರ್ಥಿಕ ಪಯಣದಲ್ಲಿ ಒಂದು ಕಾರ್ಯತಂತ್ರದ ಮೈಲಿಗಲ್ಲು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಒಪ್ಪಂದವು ರಫ್ತು ಅವಕಾಶಗಳನ್ನು ಗಮನಾರ್ಹವಾಗಿ ವಿಸ್ತರಿಸುತ್ತಿದೆ. ಕಾರ್ಮಿಕ

ವಲಯಗಳನ್ನು ಬಲಪಡಿಸಿ ಉತ್ತಮ ಗುಣಮಟ್ಟದ ಹೂಡಿಕೆಗಳನ್ನು ಆಕರ್ಷಿಸುತ್ತದೆ ಮತ್ತು ದೊಡ್ಡ ಪ್ರಮಾಣದ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದು ತಿಳಿಸಿದ್ದಾರೆ.

<><><><>

ಭಾರತ - ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದವನ್ನು ಶ್ಲಾಘಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಈ ಒಪ್ಪಂದ ಭಾರತೀಯ ರೈತರಿಗೆ ಸಂಪೂರ್ಣ ರಕ್ಷಣೆ ನೀಡುತ್ತದೆ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಡೇರಿ ಉತ್ಪನ್ನಗಳು, ಧಾನ್ಯಗಳು ಮತ್ತು ತರಕಾರಿಗಳಂತಹ ಉತ್ಪಾದನೆಗಳಲ್ಲಿ ರೈತರಿಗೆ ಭದ್ರತೆ ಒದಗಿಸಲಾಗಿದೆ. ರೈತರ ಹಿತಾಸಕ್ತಿ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದ್ದಾರೆ.

<><><><>

ಛತ್ತೀಸ್‌ಗಢದ ಬಸ್ತಾರ್‌ನ ವಿಭಾಗೀಯ ಕೇಂದ್ರವಾದ ಜಗದಲ್ಪುರಕ್ಕೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ನೀಡಿದ್ದು, ಬಸ್ತಾರ್ ಪಾಂಡಂ ಉತ್ಸವವನ್ನು ಉದ್ಘಾಟಿಸಿದ್ದಾರೆ. ಈ ವೇಳೆ ಛತ್ತೀಸಗಢ ರಾಜ್ಯಪಾಲ ರಾಮೆನ್ ದೇಕಾ ಮತ್ತು ಮುಖ್ಯಮಂತ್ರಿ ವಿಷ್ಣು ಡಿಯೋಸಾಯಿ ಉಪಸ್ಥಿತರಿದ್ದಾರೆ.

<><><><>

ಎರಡು ದಿನಗಳ ಮಲೇಷ್ಯಾ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಕೌಲಾಲಂಪುರಕ್ಕೆ ತೆರಳಿದ್ದಾರೆ. ಉಭಯ ದೇಶಗಳ ನಡುವೆ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಗೊಳಿಸುವುದೂ ಸೇರಿದಂತೆ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಅವರು ಪರಿಶೀಲಿಸಲಿದ್ದಾರೆ. ವ್ಯಾಪಾರ ಮತ್ತು ಆರ್ಥಿಕತೆ, ಉದಯೋನ್ಮುಖ ತಂತ್ರಜ್ಞಾನ, ಇಂಧನ, ಶಿಕ್ಷಣ ಒಳಗೊಂಡಂತೆ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವತ್ತ ಚರ್ಚೆಗಳು ಗಮನಹರಿಸಲಿವೆ ಎಂದು ಮಲೇಷ್ಯಾದಲ್ಲಿನ ಭಾರತದ ಹೈಕಮಿಷನರ್ ಬಿ.ಎನ್. ರೆಡ್ಡಿ ತಿಳಿಸಿದ್ದಾರೆ. ಕೌಲಾಲಂಪುರದಲ್ಲಿ 'ಸಲಾಮತ್ ದತಾಂಗ್ ಮೋದಿ ಜಿ' ಎಂಬ ಶೀರ್ಷಿಕೆಯ ಭಾರತೀಯ ಸಮುದಾಯದಿಂದ ಕಾರ್ಯಕ್ರಮ ನಡೆಯಲಿದೆ. ಇದು ಎರಡೂ ದೇಶಗಳ ನಡುವಿನ ಬಲವಾದ ಜನತೆಯ ನಡುವಿನ ಸಂಬಂಧಗಳನ್ನು ಪ್ರತಿಬಿಂಬಿಸುತ್ತದೆ. ಈ ಕಾರ್ಯಕ್ರಮವು ಮಲೇಷ್ಯಾದಾದ್ಯಂತದ ಕಲಾವಿದರ ಸಾಂಸ್ಕೃತಿಕ ಪ್ರದರ್ಶನಗಳೊಂದಿಗೆ ಬೃಹತ್ ಭಾಗವಹಿಸುವಿಕೆಗೆ ಸಾಕ್ಷಿಯಾಗುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ. ಈ ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮತ್ತು ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಮಾತನಾಡಲಿದ್ದಾರೆ. ಬಳಿಕ ನಾಳೆ ನಿಯೋಗ ಮಟ್ಟದ ಮಾತುಕತೆ ಹಾಗೂ ತಿಳುವಳಿಕೆ ಪತ್ರಗಳ ವಿನಿಮಯ ಆಗಲಿದೆ ಎಂದು ಬಿ.ಎನ್. ರೆಡ್ಡಿ ತಿಳಿಸಿದ್ದಾರೆ.

<><><><>

ಮಲೇಷ್ಯಾ ಭೇಟಿಗೆ ಮುನ್ನ ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ಚರ್ಚೆ ನಡೆಸಲು ಮತ್ತು ಎರಡೂ ದೇಶಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸಲು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ರಕ್ಷಣೆ ಮತ್ತು ಭದ್ರತಾ ಸಂಬಂಧಗಳನ್ನು ಗಾಢವಾಗಿಸುವ, ಆರ್ಥಿಕ ಹಾಗೂ ನಾವಿನ್ಯತೆ ಪಾಲುದಾರಿಕೆ ಹೆಚ್ಚಿಸುವ ಮತ್ತು ಹೊಸ

ಕ್ಷೇತ್ರಗಳಲ್ಲಿ ಸಹಯೋಗವನ್ನು ವಿಸ್ತರಿಸುವ ಗುರಿ ಹೊಂದಲಾಗಿದೆ. ಇತ್ತೀಚಿನ ವರ್ಷಗಳಲ್ಲಿ ಭಾರತ ಮತ್ತು ಮಲೇಷಿಯಾ ನಡುವಿನ ಐತಿಹಾಸಿಕ ಸಂಬಂಧವು ಸ್ಥಿರವಾದ ಪ್ರಗತಿ ಕಂಡಿದೆ ಎಂದು ಅವರು ಹೇಳಿದ್ದಾರೆ. ಮಲೇಷ್ಯಾದಲ್ಲಿ ಸುಮಾರು ಮೂರು ದಶಲಕ್ಷದಷ್ಟು ಜನಸಂಖ್ಯೆ ಹೊಂದಿರುವ ಭಾರತೀಯ ಸಮುದಾಯವನ್ನು ಭೇಟಿ ಮಾಡಲು ತಾವು ಉತ್ಸುಕರಾಗಿರುವುದಾಗಿ ತಿಳಿಸಿದ್ದಾರೆ. ಮಲೇಷ್ಯಾದ ಪ್ರಗತಿಗೆ ಅವರ ಅಪಾರ ಕೊಡುಗೆ ಮತ್ತು ಎರಡೂ ರಾಷ್ಟ್ರಗಳ ನಡುವಿನ ಜೀವಂತ ಸೇತುವೆಯಾಗಿ ಈ ಜನತೆಯ ಪಾತ್ರವು ಉಭಯ ದೇಶಗಳ ನಡುವಿನ ಐತಿಹಾಸಿಕ ಸ್ನೇಹಕ್ಕೆ ಬಲವಾದ ಅಡಿಪಾಯ ಒದಗಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿ ಪಾದಿಸಿದ್ದಾರೆ.

<><><><>

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಸಂಜೆ ಛತ್ತೀಸ್‌ಗಢಕ್ಕೆ ಮೂರು ದಿನಗಳ ಭೇಟಿಗಾಗಿ ರಾಯ್‌ಪುರಕ್ಕೆ ಆಗಮಿಸಲಿದ್ದಾರೆ. ಭೇಟಿಯ ಸಮಯದಲ್ಲಿ, ಅವರು ಛತ್ತೀಸ್‌ಗಢದ ಆಂತರಿಕ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದು, ರಾಯ್‌ಪುರ ಮತ್ತು ಜಗದಲ್‌ಪುರದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ಸಚಿವ ಅಮಿತ್ ಶಾ ಅವರು ಇಂದು ಸಂಜೆ ರಾಯ್‌ಪುರದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯಕ್ಕೆ ಸಂಬಂಧಿಸಿದ ವಿವಿಧ ಆಡಳಿತ ಮತ್ತು ಭದ್ರತಾ ಸಂಬಂಧಿತ ವಿಷಯಗಳ ಕುರಿತು ಚರ್ಚಿಸಲಾಗುವುದು. ನಾಳೆ ಅವರು ರಾಯ್‌ಪುರದಲ್ಲಿ ಎಡಪಂಥೀಯ ಉಗ್ರವಾದದ ಕುರಿತು ಉನ್ನತ ಮಟ್ಟದ ಭದ್ರತಾ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು, ಭದ್ರತಾ ಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಬಳಿಕ ರಾಯ್‌ಪುರದಲ್ಲಿ ಆಯೋಜಿಸಲಾಗುವ ರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಇದೇ ೯ ರಂದು ಜಗದಲ್‌ಪುರದಲ್ಲಿ ನಡೆಯಲಿರುವ ಬಸ್ತಾರ್ ಪಾಂಡಮ್ ಉತ್ಸವದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವರು ಭಾಗವಹಿಸಲಿದ್ದಾರೆ.

<><><><>

ಭಾರತೀಯ ಕರಾವಳಿ ಕಾವಲು ಪಡೆ ಮುಂಬೈ ಪಶ್ಚಿಮ ಸಮುದ್ರದಲ್ಲಿ ಕಾರ್ಯಾಚರಣೆ ನಡೆಸಿ, ಅಂತಾರಾಷ್ಟ್ರೀಯ ತೈಲ ಕಳ್ಳಸಾಗಾಣೆ ದಂಧೆಯನ್ನು ಭೇದಿಸಿದೆ. ಈ ವೇಳೆ ಅಕ್ರಮ ಕಳ್ಳಸಾಗಣೆಯಲ್ಲಿ ತೊಡಗಿದ್ದ ಮೂರು ಹಡಗುಗಳು ಹಾಗೂ ಅಗ್ಗದ ತೈಲ ಮತ್ತು ತೈಲ ಆಧಾರಿತ ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗಿದೆ. ಮುಂಬೈ ಪಶ್ಚಿಮಕ್ಕೆ ಸುಮಾರು ನೂರು ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ಭಾರತೀಯ ಕರಾವಳಿ ಕಾವಲುಪಡೆ ಈ ಕಾರ್ಯಾಚರಣೆ ನಡೆಸಿದೆ

<><><><>

ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನ ಶಿಯಾ ಮಸೀದಿಯಲ್ಲಿ ನಿನ್ನೆ ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ೩೧ಕ್ಕೆ ಏರಿಕೆಯಾಗಿದ್ದು, ಘಟನೆಯಲ್ಲಿ ೧೭೦ ಜನರು ಗಾಯಗೊಂಡಿದ್ದಾರೆ. ದಾಳಿಯ ಹೊಣೆಯನ್ನು ಐಸಿಸ್ ಉಗ್ರ ಸಂಘಟನೆ ಹೊತ್ತುಕೊಂಡಿದೆ. ಇಸ್ಲಾಮಾಬಾದ್ ಮಸೀದಿಯಲ್ಲಿ ನಡೆದ ಬಾಂಬ್

ದಾಳಿಯನ್ನು ಭಾರತ ಖಂಡಿಸಿದ್ದು, ಅದರಿಂದ ಉಂಟಾದ ಜೀವಹಾನಿಗೆ ಸಂತಾಪ ಸೂಚಿಸಿದೆ. ಪಾಕಿಸ್ತಾನವು ತನ್ನ ಸಾಮಾಜಿಕ ರಚನೆಯನ್ನು ಕಾಡುತ್ತಿರುವ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸುವ ಬದಲು, ತನ್ನ ಸ್ಥಳೀಯ ಸಮಸ್ಯೆಗಳಿಗೆ ಇತರರನ್ನು ದೂಷಿಸುವ ಮೂಲಕ ತನ್ನನ್ನು ತಾನು ಮೋಸಗೊಳಿಸಿಕೊಳ್ಳುತ್ತಿರುವುದು ದುರದೃಷ್ಟಕರ. ಅಂತಹ ಯಾವುದೇ ಆಧಾರರಹಿತ ಮತ್ತು ಅರ್ಥಹೀನ ಆರೋಪಗಳನ್ನು ಭಾರತ ತಿರಸ್ಕರಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

೧೯ ವರ್ಷದೊಳಗಿ ಐಸಿಸಿ ಏಕದಿನ ವಿಶ್ವಕಪ್ ಕ್ರಿಕೆಟ್ ಚಾಂಪಿಯನ್ ಆಗಿ ಹೊರಹೊಮ್ಮಿರುವ ಭಾರತೀಯ ತಂಡವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಗಣ್ಯರು ಅಭಿನಂದಿಸಿದ್ದಾರೆ. ಇದೇ ವೇಳೆ ವಿಶ್ವಕಪ್ ವಿಜೇತ ತಂಡಕ್ಕೆ ಹಾಗೂ ತಾಂತ್ರಿಕ ಸಿಬ್ಬಂದಿ ಮತ್ತು ಆಯ್ಕೆ ಸಮಿತಿಗೆ ಬಿಸಿಸಿಐ ಒಟ್ಟು ೭ ಕೋಟಿ ೫೦ ಲಕ್ಷ ರೂಪಾಯಿ ನಗದು ಬಹುಮಾನವನ್ನು ಘೋಷಿಸಿದೆ.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಪಂದ್ಯಾವಳಿಯ ಎ ಗುಂಪಿನ ಮೂರನೇ ಪಂದ್ಯದಲ್ಲಿ ಭಾರತ ಮತ್ತು ಅಮೆರಿಕ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>